ರಾಮನಗರ ಜಿಲ್ಲಾ ಕ್ರೀಡಾಂಗಣವನ್ನು ಅಭಿವೃದ್ಧಿಪಡಿಸುವುದು

137 (111) ಶ್ರೀ ರಾಜು ಕೆ (ರಾಮನಗರ): ಮಾನ್ಯ ಪ್ರವಾಸೋದ್ಯಮ ಮತ್ತು ಮೂಲಭೂತ ಸೌಕರ್ಯಗಳ ಅಭಿವೃದ್ಧಿ ಹಾಗೂ ಯುವಜನ ಸೇವೆ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ರಾಮನಗರ ಜಿಲ್ಲಾ ಕ್ರೀಡಾಂಗಣವನ್ನು ಅಭಿವೃದ್ಧಿಪಡಿಸುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ;

ಆ) ಹಾಗಿದ್ದಲ್ಲಿ, ಇದುವರೆವಿಗೂ ಅಭಿವೃದ್ಧಿಪಡಿಸದೇ ಇರಲು ಕಾರಣಗಳೇನು;

ಇ) ಜಿಲ್ಲಾ ಕ್ರೀಡಾಂಗಣವನ್ನು ಅಭಿವೃದ್ಧಿಪಡಿಸುವುದರಿಂದ ಸ್ಥಳೀಯ ಯುವಕರು ಮತ್ತು ವಿದ್ಯಾರ್ಥಿಗಳಿಗೆ ಕ್ರೀಡೆಗಳಲ್ಲಿ ಹೆಚ್ಚು ಆಸಕ್ತಿಯಿಂದ ಭಾಗವಹಿಸಲು ಪ್ರೋತ್ಸಾಹಿಸಿದಂತಾಗುವುದಿಲ್ಲವೇ ;

ಈ) ಈ ಕ್ರೀಡಾಂಗಣವನ್ನು ಅಭಿವೃದ್ಧಿಪಡಿಸಲು ಸರ್ಕಾರ ಅನುದಾನವನ್ನೇನಾದರೂ ನಿಗದಿಪಡಿಸಿ ಹಣ ಬಿಡುಗಡೆ ಮಾಡಿದೆಯೇ;

ಉ) ಹಾಗಿಲ್ಲದಿದ್ದಲ್ಲಿ, ಈ ಕ್ರೀಡಾಂಗಣವನ್ನು ಅಭಿವೃದ್ಧಿಪಡಿಸಲು ಸರ್ಕಾರಕ್ಕಿರುವ ತೊಂದರೆಗಳೇನು ?

ಶ್ರೀ ಜಿ. ಜನಾರ್ದನ ರೆಡ್ಡಿ (ಪ್ರವಾಸೋದ್ಯಮ ಮತ್ತು ಮೂಲಭೂತ ಸೌಕರ್ಯಗಳ ಅಭಿವೃದ್ಧಿ ಹಾಗೂ ಯುವಜನ ಸೇವೆ ಸಚಿವರು):

ಅ) ಇಲ್ಲ.

ಆ) ಕ್ರೀಡಾಂಗಣವನ್ನು ವಿಸ್ತರಿಸಲು ಅಗತ್ಯವಾದ ಜಮೀನು ಲಭ್ಯವಿಲ್ಲದಿರುವುದು.

ಇ) ಹೌದು.

ಈ) ಇಲ್ಲ.

ಉ) ಈಗ ಇರುವ ಕ್ರೀಡಾಂಗಣದಲ್ಲಿ ಟ್ರ್ಯಾಕ್ ಹಾಗೂ ಭಾಗಶಃ ಪ್ರೇಕ್ಷಕರ ಗ್ಯಾಲರಿ, ಜಿಮ್ ಉಪಕರಣಗಳನ್ನು ಒಳಗೊಂಡ ವ್ಯಾಯಾಮ ಶಾಲೆ ಸೇರಿದಂತೆ ಎಲ್ಲಾ ಕ್ರೀಡಾ ಸೌಲಭ್ಯಗಳು ಲಭ್ಯವಿದೆ. ಒಂದು ಕ್ರೀಡಾ ಶಾಲೆ/ನಿಲಯವನ್ನು ನಿರ್ಮಿಸಲಾಗುತ್ತಿದ್ದು, ಅದು ಅಂತಿಮ ಹಂತದಲ್ಲಿದೆ. ಈಜುಕೊಳ ನಿರ್ಮಾಣ ಕಾರ್ಯವನ್ನು ರೂ. 150 ಲಕ್ಷಗಳ ವೆಚ್ಚದಲ್ಲಿ ಕೈಗೊಳ್ಳಲಾಗಿದ್ದು, ಅದು ಅಂತಿಮ ಹಂತದಲ್ಲಿದೆ. ಬ್ಯಾಸ್ಕೆಟ್‌ಬಾಲ್ ಕೋರ್ಟ್ ನಿರ್ಮಿಸುವ ಪ್ರಸ್ತಾವನೆ ಅಂದಾಜು ಪಟ್ಟಿ ತಯಾರಿಸುವ ಹಂತದಲ್ಲಿದೆ.